All India Radio: Bangalore
National Bulletin In Kannada
04.12.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಇಂದು ನೌಕಾ ದಿನ; ವಿಕಸಿತ ಭಾರತ ಗುರಿ ಸಾಧನೆಗೆ ನೌಕಾಪಡೆಯಿಂದ ಗಣನೀಯ ಕೊಡುಗೆ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಬಾಲ್ಯ ವಿವಾಹ ಮುಕ್ತ ಭಾರತಕ್ಕಾಗಿ ೧೦೦ ದಿನಗಳ ಅಭಿಯಾನಕ್ಕೆ ಇಂದು ಚಾಲನೆ
3. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಎರಡು ದಿನಗಳ ಭಾರತ ಭೇಟಿಗಾಗಿ ಇಂದು ದೆಹಲಿಗೆ ಆಗಮನ ; ನಾಳೆ ಪ್ರಧಾನಿ ಜೊತೆ ಚರ್ಚೆ
4. ಮೊಬೈಲ್ ಉತ್ಪಾದಕರಿಗೆ ಸಂಚಾರ್ ಸಾಥಿ ಅಪ್ಲಿಕೇಷನ್ ಪೂರ್ವಸ್ಥಾಪನೆ ಕಡ್ಡಾಯಗೊಳಿಸದಿರಲು ಸರ್ಕಾರ ನಿರ್ಧಾರ
5. ಕಾಶಿ ತಮಿಳು ಸಂಗಮಂನ ಮೊದಲ ನಿಯೋಗ ಇಂದು ಅಯೋಧ್ಯೆಗೆ ಭೇಟಿ

<><><><>

ಇಂದು ನೌಕಾದಿನ. ಭಾರತೀಯ ನೌಕಾಪಡೆ ಸ್ಥಳೀಯ ತಂತ್ರಜ್ಞಾನಗಳ ಆಧುನಿಕರಣವನ್ನು ಮುಂದುವರಿಸುತ್ತದೆ ಮತ್ತು ವಿಕಸಿತ ಭಾರತವನ್ನು ನಿರ್ಮಿಸುವ ರಾಷ್ಟ್ರದ ಗುರಿಗೆ ಗಣನೀಯವಾಗಿ ಕೊಡುಗೆ ನೀಡುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನೌಕಾಪಡೆ ದಿನದ ಮುನ್ನಾದಿನವಾದ ನಿನ್ನೆ ತಿರುವನಂತಪುರದಲ್ಲಿ ನೌಕಾಪಡೆಯ ಕಾರ್ಯಾಚರಣೆ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ನೌಕಾಪಡೆ ಈಗ ದೇಶದೊಳಗೆ ಸಂಕೀರ್ಣ ವೇದಿಕೆಗಳನ್ನು ವಿನ್ಯಾಸಗೊಳಿಸಲು ಮತ್ತು ನಿರ್ಮಿಸಲು ಸಮರ್ಥವಾಗಿದೆ. ಸಾಗರ್ ದೂರದೃಷ್ಟಿಯಡಿ ಹೊಸ ಉಪಕ್ರಮಗಳು ಸಾಗರ ವಲಯದ ಜಾಗೃತಿ ಬಲಪಡಿಸುತ್ತದೆ, ಮಾನವೀಯ ನೆರವು ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ ಮತ್ತು ಅಂತಾರಾಷ್ಟ್ರೀಯ ಸಾಗರ ಸಮುದಾಯಕ್ಕೆ ಭದ್ರತೆ ಖಚಿತಪಡಿಸುತ್ತದೆ ಎಂದು ಹೇಳಿದರು. ನೀಲಿ ಆರ್ಥಿಕತೆಯ ಸಾಮರ್ಥ್ಯವನ್ನು ಬಳಸಿಕೊಳ್ಳಲು ಭಾರತ ಹೆಚ್ಚಿನ ಗಮನ ಹರಿಸುತ್ತಿದೆ ಮತ್ತು ಈ ಪ್ರಯತ್ನಗಳಲ್ಲಿ ನೌಕಾಪಡೆ ನಿರ್ಣಾಯಕ ಪಾತ್ರ ವಹಿಸುತ್ತದೆ ದ್ರೌಪದಿ ಮುರ್ಮು ತಿಳಿಸಿದರು.

ಬೈಟ್- ರಾಷ್ಟ್ರಪತಿ (೩೦ ಸೆಕೆಂಡ್‌ಗಳು)

<><><><>

ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನದ ಒಂದು ವರ್ಷವನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಬಾಲ್ಯ ವಿವಾಹ ಮುಕ್ತ ಭಾರತಕ್ಕಾಗಿ ೧೦೦ ದಿನಗಳ ತೀವ್ರ ಜಾಗೃತಿ ಅಭಿಯಾನಕ್ಕೆ ನವದೆಹಲಿಯ ವಿಜ್ಞಾನ ಭವನದಲ್ಲಿ ಇಂದು ಅಧಿಕೃತವಾಗಿ ಚಾಲನೆ ನೀಡಲಾಗುವುದು. ಇಂದು ನಡೆಯುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ಸಹಾಯಕ ಸಚಿವೆ ಸಾವಿತ್ರಿ ಠಾಕೂರ್ ಮತ್ತಿತರರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮ

ಬಾಲ್ಯವಿವಾಹವನ್ನು ಕೊನೆಗೊಳಿಸುವ ರಾಷ್ಟ್ರೀಯ ಪ್ರತಿಜ್ಞೆ ಎಂಬ ಚಲನಚಿತ್ರ ಪ್ರದರ್ಶನವನ್ನು ಒಳಗೊಂಡಿದೆ. ಈ ಅಭಿಯಾನವು ಸಮುದಾಯಗಳಿಗೆ ಶಕ್ತಿ ತುಂಬಲು ಮತ್ತು ನಿರಂತರ ಕ್ರಿಯೆಯನ್ನು ಪ್ರೋತ್ಸಾಹಿಸಲು ವಿನ್ಯಾಸಗೊಳಿಸಲಾದ ರಚನಾತ್ಮಕ, ಮೂರು-ಹಂತಗಳ ಯೋಜನೆಯನ್ನು ಅನುಸರಿಸುತ್ತದೆ: ಮೊದಲನೇ ಹಂತ ನವೆಂಬರ್ ೨೭ ರಿಂದ ಡಿಸೆಂಬರ್ ೩೧ರವರೆಗೆ ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಜಾಗೃತಿ ಚಟುವಟಿಕೆ ನಡೆಯಲಿವೆ. ಅದರಲ್ಲಿ ಚರ್ಚೆಗಳು, ಪ್ರಬಂಧ ಸ್ಪರ್ಧೆಗಳು, ಸಂವಾದ ಗೋಷ್ಠಿಗಳು ಮತ್ತು ಪ್ರತಿಜ್ಞೆ ಸಮಾರಂಭಗಳು ಸೇರಿವೆ. ಎರಡನೇ ಹಂತ ಜನವರಿ ೧ರಿಂದ ೩೧ವರೆಗೆ ಮಕ್ಕಳ ಹಕ್ಕುಗಳು, ಸುರಕ್ಷತೆ ಮತ್ತು ಸಬಲೀಕರಣದ ಕುರಿತು ಸಂದೇಶಗಳನ್ನು ವರ್ಧಿಸಲು ಧಾರ್ಮಿಕ ನಾಯಕರು, ಸಮುದಾಯದ ಪ್ರಭಾವಿಗಳು ಮತ್ತು ವಿವಾಹ ಸೇವಾ ಪೂರೈಕೆದಾರರೊಂದಿಗೆ ತೊಡಗಿಸಿಕೊಳಲಾಗುವುದು.  ಮೂರನೇ ಹಂತ ಫೆಬ್ರವರಿ ೧ರಿಂದ ಮಾರ್ಚ್ ೮ರವರೆಗೆ ನಡೆಯಲಿದ್ದು, ಅದರಲ್ಲಿ ಗ್ರಾಮ ಪಂಚಾಯಿತಿಗಳು ಮತ್ತು ಪುರಸಭೆಯ ವಾರ್ಡ್‌ಗಳನ್ನು ಸಜ್ಜುಗೊಳಿಸಿ ತಮ್ಮ ವ್ಯಾಪ್ತಿಯನ್ನು ಬಾಲ್ಯವಿವಾಹ ಮುಕ್ತವೆಂದು ಘೋಷಿಸುವ ನಿರ್ಣಯಗಳನ್ನು ಅಂಗೀಕರಿಸಲಾಗುವುದು. ಈ ರಾಷ್ಟ್ರೀಯ ಅಭಿಯಾನವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಶಿಕ್ಷಣ ಸಚಿವಾಲಯಗಳ ನಿಕಟ ಸಮನ್ವಯದೊಂದಿಗೆ ಜಾರಿಗೊಳಿಸಲಾಗುತ್ತಿದೆ. ಈ ೧೦೦ ದಿನಗಳ ಅಭಿಯಾನದ ಮೂಲಕ ದೇಶಾದ್ಯಂತ ನಾಗರಿಕರು, ಸಂಸ್ಥೆಗಳು ಮತ್ತು ಸಮುದಾಯ ಮುಖಂಡರು ಈ ಆಂದೋಲನಕ್ಕೆ ಸೇರಲು ಮತ್ತು ಬಾಲ್ಯವಿವಾಹ ಮುಕ್ತ ಭಾರತವನ್ನು ನಿರ್ಮಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಲು ಸಚಿವಾಲಯ ಕರೆ ನೀಡುತ್ತದೆ.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ರಷ್ಯಾದ ಸಹವರ್ತಿ ಆಂಡ್ರೇ ಬೆಲೌಸೊವ್ ನವದೆಹಲಿಯಲ್ಲಿಂದು ನಡೆಯಲಿರುವ ೨೨ನೇ ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ಮಿಲಿಟರಿ ಮತ್ತು ತಾಂತ್ರಿಕ ಸಹಕಾರ ಸಚಿವರ ಸಭೆಯ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಉಭಯ ನಾಯಕರು ರಕ್ಷಣಾ ಕ್ಷೇತ್ರದಲ್ಲಿ ಎರಡೂ ದೇಶಗಳ ನಡುವಿನ ಬಹುಮುಖಿ ಸಂಬಂಧಗಳ ಕುರಿತು ಚರ್ಚೆ ನಡೆಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಪರಸ್ಪರ ಆಸಕ್ತಿಯ ಸಮಕಾಲೀನ, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅವರು ವಿಚಾರ ವಿನಿಮಯ ನಡೆಸಲಿದ್ದಾರೆ. ಭೇಟಿಯ ವೇಳೆ ಬೆಲೌಸೊವ್ ಅವರು ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಪುಷ್ಪಗುಚ್ಛ ಅರ್ಪಿಸಲಿದ್ದಾರೆ ಮತ್ತು ಕರ್ತವ್ಯದಲ್ಲಿದ್ದಾಗ ಅತ್ಯುನ್ನತ ತ್ಯಾಗ ಮಾಡಿದ ಭಾರತೀಯ ಸೈನಿಕರಿಗೆ ಗೌರವ ಸಲ್ಲಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<><><><>

೨೩ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಅಧಿಕೃತ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಲಿದ್ದಾರೆ. ಎರಡು ದಿನಗಳ ಭೇಟಿಯ ಸಮಯದಲ್ಲಿ, ಅಧ್ಯಕ್ಷ ಪುಟಿನ್ ನಾಳೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ

ನಡೆಸಲಿದ್ದಾರೆ. ಇಬ್ಬರೂ ನಾಯಕರು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ. ವ್ಯಾಪಾರ, ಆರ್ಥಿಕತೆ, ಆರೋಗ್ಯ ರಕ್ಷಣೆ, ಶೈಕ್ಷಣಿಕ, ಸಂಸ್ಕೃತಿ ಮತ್ತು ಮಾಧ್ಯಮಕ್ಕೆ ಸಂಬಂಧಿಸಿದ ಕ್ಷೇತ್ರಗಳು ಸೇರಿದಂತೆ ಹಲವು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಷ್ಯಾದ ಅಧ್ಯಕ್ಷರನ್ನು ಸ್ವಾಗತಿಸುವರು ಮತ್ತು ಅವರ ಗೌರವಾರ್ಥ ಔತಣಕೂಟ ಆಯೋಜಿಸಿದ್ದಾರೆ. ಈ ಭೇಟಿಯು ಭಾರತ ಮತ್ತು ರಷ್ಯಾ ನಾಯಕತ್ವಕ್ಕೆ ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿ ಪರಿಶೀಲಿಸಲು, ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ದೂರದೃಷ್ಟಿಯ ಸಾಕಾರಕ್ಕೆ ಅವಕಾಶವನ್ನು ಒದಗಿಸುತ್ತದೆ. ಭಾರತದ ಪ್ರಧಾನಿ ಮತ್ತು ರಷ್ಯಾ ಅಧ್ಯಕ್ಷರ ನಡುವಿನ ವಾರ್ಷಿಕ ಶೃಂಗಸಭೆಯು ಭಾರತ ಮತ್ತು ರಷ್ಯಾ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಅತ್ಯುನ್ನತ ಸಾಂಸ್ಥಿಕ ಸಂವಾದ ಕಾರ್ಯವಿಧಾನವಾಗಿದೆ. ಈವರೆಗೆ, ಭಾರತ ಮತ್ತು ರಷ್ಯಾದಲ್ಲಿ ಪರ್ಯಾಯವಾಗಿ ೨೨ ವಾರ್ಷಿಕ ಶೃಂಗಸಭೆಗಳು ನಡೆದಿವೆ. ಈ ಕುರಿತು ನಮ್ಮ ಪ್ರತಿನಿಧಿ ಹೆಚ್ಚಿನ ವಿವರ ನೀಡಿದ್ದಾರೆ.

ಬೈಟ್- ಸುಪರ್ಣ (೩೮ ಸೆಕೆಂಡ್‌ಗಳು)

<><><>

ಸಂಚಾರ್ ಸಾಥಿ ಅಪ್ಲಿಕೇಶನ್‌ಗೆ ಹೆಚ್ಚುತ್ತಿರುವ ಸ್ವೀಕಾರವನ್ನು ಗಮನದಲ್ಲಿಟ್ಟುಕೊಂಡು, ಮೊಬೈಲ್ ಉತ್ಪಾದಕರು ಈ ಅಪ್ಲಿಕೇಶನ್‌ನ ಪೂರ್ವ-ಸ್ಥಾಪನೆಯನ್ನು ಕಡ್ಡಾಯಗೊಳಿಸದಿರಲು ಸರ್ಕಾರ ನಿರ್ಧರಿಸಿದೆ. ನಾಗರಿಕರು ಯಾವಾಗ ಬೇಕಾದರೂ  ಈ ಅಪ್ಲಿಕೇಶನ್ ಅನ್ನು ತೆಗೆದುಹಾಕಬಹುದಾಗಿದೆ. ಬಳಕೆದಾರರನ್ನು ರಕ್ಷಿಸುವುದನ್ನು ಹೊರತುಪಡಿಸಿ, ಇದರಲ್ಲಿ ಬೇರೆ ಯಾವುದೇ ಉದ್ದೇಶವಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಈವರೆಗೆ ೧ ಕೋಟಿ ೪ ಲಕ್ಷ ಬಳಕೆದಾರರು ಈ ಅಪ್ಲಿಕೇಶನ್ ಅನ್ನು ಡೌನ್‌ಲೋಡ್ ಮಾಡಿದ್ದಾರೆ ಮತ್ತು ಪ್ರತಿದಿನ ೨ ಸಾವಿರ ವಂಚನೆ ಘಟನೆಗಳು ವರದಿಯಾಗುತ್ತಿವೆ ಎಂದು ಸಂವಹನ ಸಚಿವಾಲಯ ತಿಳಿಸಿದೆ.

<><><>

ಕಾಶಿ ತಮಿಳು ಸಂಗಮಂನ ಮೊದಲ ನಿಯೋಗ, ಹನುಮಾನ್ ಘಾಟ್, ಬಿಎಚ್‌ಯು ಮತ್ತು ಸಾರನಾಥ್ ಸೇರಿದಂತೆ ಕಾಶಿಯ ವಿವಿಧ ಪ್ರಮುಖ ಸ್ಥಳಗಳಿಗೆ ಭೇಟಿ ನೀಡಿದ ನಂತರ, ಇಂದು ಅಯೋಧ್ಯೆಗೆ ಭೇಟಿ ನೀಡಲಿದೆ. ನಿಯೋಗದ ಪ್ರತಿನಿಧಿಗಳನ್ನು ಸ್ವಾಗತಿಸಲು, ಸಕಲ ವ್ಯವಸ್ಥೆಗಳನ್ನು ಮಾಡಲಾಗಿದೆ. ಅಯೋಧ್ಯೆಯ ಜಿಲ್ಲಾ ಮ್ಯಾಜಿಸ್ಟ್ರೇಟ್ ನಿಖಿಲ್ ಟಿಕರಾಮ್ ಫಂಡೆ ನಿನ್ನೆ ಶ್ರೀರಾಮ್ ಸಭಾಂಗಣವನ್ನು ಪರಿಶೀಲಿಸಿ, ಅಲ್ಲಿದ್ದ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು. ತಮಿಳುನಾಡಿನ ಎಲ್ಲಾ ನಿಯೋಗಗಳು ನಿಯಮಿತವಾಗಿ ಅಯೋಧ್ಯೆಗೆ ಭೇಟಿ ನೀಡುತ್ತವೆ. ಇಂದು ಹಾಗೂ ಇದೇ ೬, ೮, ೧೦, ೧೨, ೧೪ ಮತ್ತು ೧೬ ರಂದು ಅತಿಥಿಗಳ ಆಗಮನದ ದಿನಾಂಕಗಳನ್ನು ನಿಗದಿಪಡಿಸಲಾಗಿದೆ. ಪ್ರತಿದಿನ ವಿವಿಧ ಗುಂಪುಗಳು ಅಯೋಧ್ಯೆಗೆ ಆಗಮಿಸಲಿದ್ದು, ಅವರನ್ನು ಸ್ವಾಗತಿಸಲು ನ್ಯಾಯಾಧೀಶರು, ಪೊಲೀಸರು ಮತ್ತು ಸಂಬಂಧಿತ ಇಲಾಖೆಗಳ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

<><><>

ರಾಯ್‌ಪುರದ ಶಹೀದ್ ವೀರ್ ನಾರಾಯಣ್ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಸರಣಿಯ ಎರಡನೇ ಏಕದಿನ ಕ್ರಿಕೆಟ್ ಪಂದ್ಯದಲ್ಲಿ, ದಕ್ಷಿಣ ಆಫ್ರಿಕಾ ತಂಡ, ಭಾರತವನ್ನು ೪ ವಿಕೆಟ್‌ಗಳಿಂದ ಸೋಲಿಸಿದೆ. ಗೆಲುವಿನ ೩೫೯ ರನ್ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ ಇನ್ನೂ ೪ ಎಸೆತಗಳು ಬಾಕಿ ಇರುವಂತೆಯೇ, ೬ ವಿಕೆಟ್‌ಗಳಿಗೆ ೩೬೨ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಈ ಗೆಲುವಿನೊಂದಿಗೆ, ಮೂರು ಪಂದ್ಯಗಳ ಏಕದಿನ ಸರಣಿಯು ಈಗ ೧-೧ ರಿಂದ ಸಮಬಲಗೊಂಡಿದೆ. ಸರಣಿಯ ಕೊನೆಯ ಪಂದ್ಯ ಇದೇ ೬ರಂದು ವಿಶಾಖಪಟ್ಟಣದಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>